## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೊಸಕೋಟೆ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆಗೆ ಅಂತಿಮ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ನಅಇ 152 ಬಿಎಂಆರ್ 2013, ದಿನಾಂಕ: 16-09-2013.
2) ಸರ್ಕಾರದ ಆದೇಶ ಸಂಖ್ಯೆ: ನಅಇ 27 ಬಿಎಂಆರ್ 2014, ದಿನಾಂಕ: 05-03-2014.
3) ಸರ್ಕಾರದ ಆದೇಶ ಸಂಖ್ಯೆ: ನಅಇ 152 ಬಿಎಂಆರ್ 2013, ದಿನಾಂಕ: 12-01-2016.
4) ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ:ಬಿಎಂಆರ್‌ಡಿಎ/ಎಡಿಟಿಪಿ-2/ಮಾಸ್ಟರ್ ಪ್ಲಾನ್-ಹೆಚ್‌ಪಿಎ/04/2012-13, ದಿನಾಂಕ:25-09-2017.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರ ಸರ್ಕಾರದ ಆದೇಶದಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ಹೊಸಕೋಟೆ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿದ ತಾತ್ಕಾಲಿಕ (provisional) ಮಹಾಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ 1961ರ ಕಲಂ 13(1) ರನ್ವಯ ಕೆಲವು ನಿಬಂಧನೆಗಳಿಗೆ ಒಳಪಟ್ಟು ಸರ್ಕಾರದ ತಾತ್ಕಾಲಿಕ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರ ಸರ್ಕಾರದ ಆದೇಶದಲ್ಲಿ ಸದರಿ ತಾತ್ಕಾಲಿಕ ಮಹಾಯೋಜನೆಗೆ ಸಂಬಂಧಿಸಿದಂತೆ, ಸಾರ್ವಜನಿಕರಿಂದ ಸ್ವೀಕರಿಸಿರುವ ಸಲಹೆ/ಆಕ್ಷೇಪಣೆಗಳನ್ನು ಪರಿಶೀಲಿಸಲು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ರವರ ಅಧ್ಯಕ್ಷತೆಯಲ್ಲಿ, ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರ ಸರ್ಕಾರದ ಆದೇಶದಲ್ಲಿ ಸರ್ಕಾರದ ಆದೇಶ ಸಂಖ್ಯೆ:ನಅಇ 27 ಬಿಎಂಆರ್ 2014, ದಿನಾಂಕ:05-03-2014ನ್ನು ಪರಿಷ್ಕರಿಸಿ ಹೊಸಕೋಟೆ ಯೋಜನಾ ಪ್ರದೇಶದ ತಾತ್ಕಾಲಿಕ ಅನುಮೋದಿತ ಕರಡು ಮಹಾಯೋಜನೆಗೆ ಸಾರ್ವಜನಿಕರಿಂದ ಸ್ವೀಕರಿಸಿರುವ ಸಲಹೆ/ಆಕ್ಷೇಪಣೆಗಳನ್ನು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಅಧಿಕಾರಿಗಳ ಸಮಿತಿಯು ಪರಿಶೀಲಿಸಿ ಸಲ್ಲಿಸುವ ಬದಲಿಗೆ ಹೊಸಕೋಟೆ ಯೋಜನಾ ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(2)ರ ಅಡಿಯಲ್ಲಿ ಸ್ವೀಕರಿಸಲಾದ ಸಾರ್ವಜನಿಕ ಸಲಹೆ/ಆಕ್ಷೇಪಣೆಗಳನ್ನು ಪರಿಶೀಲಿಸಿ, ಮಹಾಯೋಜನೆಯನ್ನು ಅಂತಿಮಗೊಳಿಸಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಮುಖಾಂತರ ಸರ್ಕಾರದ ಅನುಮೋದನೆಗೆ ಸಲ್ಲಿಸುವಂತೆ ಆದೇಶಿಸಲಾಗಿರುತ್ತದೆ.

...2)

ಹೊಸಕೋಟೆ ಯೋಜನಾ ಪ್ರಾಧಿಕಾರದ ಸಭೆಗಳಲ್ಲಿ ಕರಡು ಮಹಾಯೋಜನೆಗೆ ನಿಗಧಿತ ಅವಧಿಯೊಳಗೆ ಸಾರ್ವಜನಿಕರಿಂದ ಸ್ವೀಕೃತವಾಗಿರುವ ಒಟ್ಟು 1774 ಸಲಹೆ/ಅಭಿಪ್ರಾಯಗಳನ್ನು ಪ್ರಕರಣವಾರು ಮತ್ತು ಹೋಬಳಿವಾರು ಪರಿಶೀಲಿಸಿ ಮಹಾಯೋಜನೆಯನ್ನು ಅಂತಿಮಗೊಳಿಸಲಾಗಿರುತ್ತದೆ. ದಿನಾಂಕ:22-07-2017 ರಂದು ನಡೆದ ಹೊಸಕೋಟೆ ಯೋಜನಾ ಪ್ರಾಧಿಕಾರದ 70ನೇ ಸಾಮಾನ್ಯ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದನ್ವಯ ಅಂತಿಮಗೊಳಿಸಿದ ಮಹಾಯೋಜನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರಡಿ ಸರ್ಕಾರದ ಅಂತಿಮ ಅನುಮೋದನೆಗಾಗಿ ಸದಸ್ಯ ಕಾರ್ಯದರ್ಶಿ, ಹೊಸಕೋಟೆ ಯೋಜನಾ ಪ್ರಾಧಿಕಾರ ಇವರು ಸಲ್ಲಿಸಿದ್ದು, ಮೇಲೆ ಓದಲಾದ ಕ್ರಮ ಸಂಖ್ಯೆ:(4)ರ ಪತ್ರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಮಹಾಯೋಜನೆಯ ನಕ್ಷೆ ಹಾಗೂ ವರದಿಗಳೊಂದಿಗೆ ಸರ್ಕಾರದ ಅನುಮೋದನೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಹೊಸಕೋಟೆ ಯೋಜನಾ ಪ್ರದೇಶದ ಮಹಾಯೋಜನೆಯನ್ನು 2031ನೇ ಇಸವಿಗೆ ತಯಾರಿಸಿದ್ದು, ಉದ್ದೇಶಿತ ಮಹಾಯೋಜನೆ ಅಡಿ ಭೂ ಉಪಯೋಗಕ್ಕೆ ಸಂಬಂಧಿಸಿದ ವಿವರ ಈ ಕೆಳಗಿನಂತೆ ಇರುತ್ತದೆ.

| ಕ್ರ. ಸಂ. | ಭೂ ಉಪಯೋಗ | ಅನುಮೋದಿತ ಕರಡು ಮಹಾಯೋಜನೆ 2031ರ ಭೂ ಬಳಕೆ ವಿವರ (ಹೆಕ್ಟೇರ್‌ಗಳಲ್ಲಿ) | | ಅಂತಿಮಗೊಳಿಸಿದ ಮಹಾಯೋಜನೆ 2031ರ ಭೂ ಬಳಕೆ ವಿವರ (ಹೆಕ್ಟೇರ್‌ಗಳಲ್ಲಿ) | | ಅಂತಿಮಗೊಳಿಸಿದ ಮಹಾಯೋಜನೆ-2031ರ ಭೂಬಳಕೆ ವಿವರಗಳಲ್ಲಿ ಎಸ್‌ಟಿಆರ್ ಮತ್ತು ನಂದಗುಡಿ ಪ್ರದೇಶವನ್ನು ಹೊರತುಪಡಿಸಿರುವ ಭೂಬಳಕೆ ವಿವರ (ಹೆಕ್ಟೇರ್‌ಗಳಲ್ಲಿ) | |
|---|---|---|---|---|---|---|---|
| | | ವಿಸ್ತೀರ್ಣ | % | ವಿಸ್ತೀರ್ಣ | % | ವಿಸ್ತೀರ್ಣ | % |
| 1 | ವಸತಿ | 3650.62 | 34.47 | 2923.00 | 34.95 | 3791.46 | 39.56 |
| 2 | ವಾಣಿಜ್ಯ | 466.99 | 4.41 | 396.00 | 4.73 | 452.52 | 4.72 |
| 3 | ಕೈಗಾರಿಕೆ | 3614.00 | 34.12 | 2637.00 | 31.53 | 2670.90 | 27.87 |
| 4 | ಸಾರ್ವಜನಿಕ/ ಅರೆ ಸಾರ್ವಜನಿಕ ಮತ್ತು ಸಾರ್ವಜನಿಕ ಸೌಲಭ್ಯ | 141.90 | 1.34 | 217.00 | 2.59 | 291.43 | 3.04 |
| 5 | ಉದ್ಯಾನವನ/ ಆಟದ ಮೈದಾನ/ಸ್ಮಶಾನ | 1087.12 | 10.26 | 970.00 | 11.60 | 921.84 | 9.62 |
| 6 | ಸಾರ್ವಜನಿಕ ಸೌಲಭ್ಯ | 173.65 | 1.64 | 69.00 | 0.83 | 67.87 | 0.71 |
| 7 | ಸಾರಿಗೆ ಮತ್ತು ಸಂಪರ್ಕ | 1457.43 | 13.76 | 1152.00 | 13.77 | 1388.12 | 14.48 |
| | ಒಟ್ಟು (ಎ) | 10591.71 | 100 | 8364.00 | 100 | 9584.14 | 100 |
| a) | ವ್ಯವಸಾಯದ ಜಮೀನು | 40.47 | – | – | – | – | – |
| b) | ಅರಣ್ಯ ಪ್ರದೇಶ | 167.12 | – | 156.00 | – | 15.99 | – |
| c) | ಜಲಾವೃತ ಪ್ರದೇಶ | 1558.74 | – | 991.00 | – | 451.19 | – |
| d) | Unclassified | 245.81 | – | 255.00 | – | 245.09 | – |
| | ಒಟ್ಟು (ಬಿ) | 2012.14 | | 1402.00 | – | 721.26 | – |
| | ಒಟ್ಟು (ಎ+ಬಿ) | 12603.85 | – | 9766.00 | – | 10277.65 | – |

4

...3)

ಮೇಲ್ಕಂಡ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 152 ಬಿಎಂಆರ್ 2013, ಬೆಂಗಳೂರು ದಿನಾಂಕ:30-01-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಬರುವ ಹೊಸಕೋಟೆ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾಯೋಜನೆಗೆ ಈ ಕೆಳಗಿನ ನಿಬಂಧನೆಗಳಿಗೆ ಒಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3)ರ ಅಡಿಯಲ್ಲಿ ಸರ್ಕಾರದ ಅಂತಿಮ ಅನುಮೋದನೆ ನೀಡಲಾಗಿದೆ.

1) ಸದರಿ ಅನುಮೋದನೆಯು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ:4188/2016 ಶ್ರೀ ಚೆರಿಯನ್ ಅರಮನ ಪಾಲ್ ಮತ್ತು ಇತರರು ವಿರುದ್ಧ ರಾಜ್ಯ ಸರ್ಕಾರ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ ಒಳಪಡುವ ಷರತ್ತಿಗೊಳಪಟ್ಟಿದೆ.
2) ಈ ಆದೇಶ ಹೊರಡಿಸಿದ ದಿನಾಂಕದಿಂದ ಎರಡು (02) ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆ ಸಲ್ಲಿಸತಕ್ಕದ್ದಲ್ಲ;
3) ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸಲು ಉದ್ದೇಶಿಸಿರುವ Satellite Town Ring Road (STRR), Individual Town Ring Road (ITRR), Intermediate Ring Road (IRR) ಹಾಗೂ Ring Road (RR) ರಸ್ತೆಗಳ ಅಂತಿಮ ಪಂಕ್ತೀಕರಣವನ್ನು ಅಭಿವೃದ್ಧಿಗೆ ಅನುಮೋದಿಸುವ ಮೊದಲು ಪರಿಶೀಲಿಸತಕ್ಕದ್ದು.
4) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69(1)ರ ಪ್ರಕಾರ, ಈ ಆದೇಶದ ದಿನಾಂಕದಿಂದ 5 ವರ್ಷಗಳೊಳಗೆ ಉದ್ಯಾನವನ, ಬಯಲು ಜಾಗ, ಆಟದ ಮೈದಾನ ಮತ್ತು ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ ಮೀಸಲಿಟ್ಟ ಜಮೀನುಗಳನ್ನು ನಿಯಮಾನುಸಾರ ಭೂ ಸ್ವಾಧೀನಪಡಿಸಿಕೊಳ್ಳಲು ಕ್ರಮ ವಹಿಸುವುದು.
5) ಮಹಾಯೋಜನೆಯಲ್ಲಿ ಗುರುತಿಸಲಾಗಿರುವ ಸರ್ವೆ ನಂಬರ್‌ಗಳು, ನಾಲೆ/ಅತಿ ಹೆಚ್ಚು ವಿದ್ಯುತ್ ವಾಹಕ ತಂತಿಗಳು/ಹಾಲಿ ರಸ್ತೆ/ಕೆರೆ/ಕೊಳಗಳಲ್ಲಿ ಯಾವುದಾದರೂ ತಪ್ಪಿದ್ದಲ್ಲಿ ಅಂತಹ ತಪ್ಪುಗಳನ್ನು ಸೂಕ್ತ ದಾಖಲೆಗಳೊಂದಿಗೆ ಸ್ಥಳ ಪರಿಶೀಲಿಸಿ ದೃಢಪಡಿಸಿಕೊಂಡು ವಾಸ್ತವಾಂಶಗಳನ್ನು ಗಣನೆಗೆ ತೆಗೆದುಕೊಂಡು ಪ್ರಾಧಿಕಾರವು ಸರಿಪಡಿಸಿಕೊಳ್ಳತಕ್ಕದ್ದು;
6) ಮಹಾಯೋಜನೆಯಲ್ಲಿ ಗುರುತಿಸಿರುವ ಅಧಿಕ ವಿದ್ಯುತ್‌ವಾಹಕ ತಂತಿ, ರಸ್ತೆ, ನಾಲೆಯ ಪಂಕ್ತೀಕರಣದಲ್ಲಿ ಹಾಗೂ ಭೂಮಿಯ ಮೇಲೆ ಹಾಲಿ ಇರುವ ಪಂಕ್ತೀಕರಣದಲ್ಲಿ ವ್ಯತ್ಯಾಸವಿದ್ದಲ್ಲಿ, ಇರುವ ಪಂಕ್ತೀಕರಣದನ್ವಯ ಗುರುತಿಸಿದ ನಂತರ ಉಳಿಯುವ ಜಾಗವನ್ನು ಜಮೀನಿಗೆ ಹೊಂದಿಕೊಂಡಿರುವ ಭೂ ಉಪಯೋಗವನ್ನು ನಿಗದಿಪಡಿಸಬಹುದು;
7) ಹಾಲಿ ರಸ್ತೆಯ ಪಂಕ್ತೀಕರಣವನ್ನು ಮಹಾಯೋಜನೆಯಲ್ಲಿ ತಪ್ಪಾಗಿ ಗುರುತಿಸಿದಂತಹ ಪ್ರಕರಣಗಳಲ್ಲಿ ಸೂಕ್ತ ದಾಖಲೆಗಳೊಂದಿಗೆ (Cadastral Map) ಹಾಲಿ ಭೂಮಿಯ ಮೇಲಿರುವ ರಸ್ತೆ ಪಂಕ್ತೀಕರಣವನ್ನು ರಸ್ತೆ ಅಗಲೀಕರಣ ಮಾಡುವಾಗ ಪರಿಗಣನೆಗೆ ತೆಗೆದುಕೊಳ್ಳತಕ್ಕದ್ದು ಹಾಗೂ ಮಹಾಯೋಜನೆಯಲ್ಲಿ ಹಾಲಿ ರಸ್ತೆಯನ್ವಯ ಪಂಕ್ತೀಕರಣ ಅಳವಡಿಸಿಕೊಂಡ ನಂತರ ಉಳಿಯುವ ಜಾಗವನ್ನು ಪ್ರಸ್ತುತ ಜಮೀನಿಗೆ ಹೊಂದಿಕೊಂಡಿರುವ ಭೂ ಉಪಯೋಗ (Higher land use) ನಿಗದಿಪಡಿಸಿಕೊಳ್ಳತಕ್ಕದ್ದು.

...4)

8) ಹೊಸಕೋಟೆ ಯೋಜನಾ ಪ್ರದೇಶದ ಅಂತಿಮ ಮಹಾಯೋಜನೆಗೆ ಸಂಬಂಧಿಸಿದ ವರದಿ ಮತ್ತು ಭೂ ಉಪಯೋಗ ಯೋಜನೆಯ ಎಲ್ಲಾ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆ ಹಾಕಿ, ಸಂಬಂಧಪಟ್ಟ ಅಧಿಕಾರಿ ಸಹಿ ಮಾಡಲು ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಕೆ.ಎಸ್. ಜಗದೀಶರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು (ಸದರಿ ಆದೇಶವನ್ನು ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ನಗರಾಭಿವೃದ್ಧಿ ಇಲಾಖೆಗೆ ಒದಗಿಸುವಂತೆ ಕೋರುತ್ತಾ).

ಪ್ರತಿ ಇವರಿಗೆ:-

(1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸ ಸೌಧ.
(2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮೂಲಭೂತ ಸೌಲಭ್ಯ ಅಭಿವೃದ್ಧಿ ಇಲಾಖೆ, ವಿಕಾಸ ಸೌಧ,
(3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಡಿಗಳ ಕಟ್ಟಡ,
(4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ,
(5) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ವಿಕಾಸ ಸೌಧ,
(6) ಮಹಾನಗರ ಆಯುಕ್ತರು, ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
(7) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
(8) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆ (KUIDFC), ಬೆಂಗಳೂರು.
(9) ಆಯುಕ್ತರು, ನಗರ ಭೂ ಸಾರಿಗೆ ನಿರ್ದೇಶನಾಲಯ, ಬೆಂಗಳೂರು.
(10) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.
(11) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮೆಟ್ರೋ ರೈಲು ಕಾರ್ಪೋರೇಷನ್, ಬೆಂಗಳೂರು.
(12) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.
(13) ಮುಖ್ಯ ಕಾರ್ಯನಿರ್ವಹಣಾಧಿಕಾರಿ, National Highway Authority of India, ಬೆಂಗಳೂರು.
(14) ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ್ ಅರಸ್ ಟ್ರಕ್ ಟರ್ಮಿನಲ್ ಲಿಮಿಟೆಡ್ (DDUTTL), ಬೆಂಗಳೂರು.
(15) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
(16) ಜಿಲ್ಲಾಧಿಕಾರಿ, ಬೆಂಗಳೂರು ನಗರ/ಗ್ರಾಮಾಂತರ ಜಿಲ್ಲೆ, ಬೆಂಗಳೂರು.
(17) ಸದಸ್ಯ ಕಾರ್ಯದರ್ಶಿ, ಹೊಸಕೋಟೆ ಯೋಜನಾ ಪ್ರಾಧಿಕಾರ, ಹೊಸಕೋಟೆ.
(18) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
(19) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.